ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಸುನೀಲ್‌ಗೌಡ ಪಾಟೀಲ್ ರವರ ನಿಯಮ **72** ರಡಿಯಲ್ಲಿ ಕೇಳಿರುವ ಸೂಚನೆಗೆ ಉತ್ತರ ಸಲ್ಲಿಸುವ ಬಗ್ಗೆ - ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರ ಹೇಳಿಕೆ.

## : ಸೂಚನೆಯ ವಿಷಯ :

ವಿಜಯಪುರ ಜಿಲ್ಲೆಯ ಬಬಲೇಶ್ವರ ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿಗಳ ಭ್ರಷ್ಟಾಚಾರ ಮತ್ತು ಕರ್ತವ್ಯ ಲೋಪಗಳ ಕುರಿತು ಜಿಲ್ಲಾಧಿಕಾರಿಯವರು ವರದಿ ಸಲ್ಲಿಸಿದ್ದರೂ ಇಲ್ಲಿಯವರೆಗೆ ಕ್ರಮ ಜರುಗಿಸದೆ ಇರುವ ಕುರಿತು

## : ಉತ್ತರ:

ವಿಜಯಪುರ ಜಿಲ್ಲೆಯ ಬಬಲೇಶ್ವರ ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿರುವ ಶ್ರೀ.ಡಿ.ಎನ್.ತಹಶೀಲ್ದಾರ್, (ಮೂಲ ಹುದ್ದೆ ಪ್ರಥಮ ದರ್ಜೆ ಸಹಾಯಕ) ಇವರು ಈ ಹಿಂದೆ ನಿಡಗುಂದಿ ಪಟ್ಟಣ ಪಂಚಾಯಿತಿಯಲ್ಲಿ ಮುಖ್ಯಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ ಅವಧಿಯಲ್ಲಿ ನಡೆಸಿದ ಭ್ರಷ್ಟಾಚಾರ ಮತ್ತು ಕರ್ತವ್ಯಲೋಪಗಳ ಕುರಿತು ಜಿಲ್ಲಾಧಿಕಾರಿಗಳು, ವಿಜಯಪುರ ರವರು ಸಲ್ಲಿಸಿರುವ ದಿನಾಂಕ **24.09.2021**ರ ಶಿಸ್ತು ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ನಿರ್ದೇಶನಾಲಯದಿಂದ ಸದರಿಯವರ ವಿರುದ್ಧ ಶಿಸ್ತು ಕ್ರಮ ಜರುಗಿಸುವ ಸಲುವಾಗಿ ಸಿಸಿಎ ನಿಯಮಾವಳಿಗಳ **1957** ರ ನಿಯಮ **11**ರಡಿ ದೋಷಾರೋಪಣಾ ಪಟ್ಟಿಯನ್ನು ಸಿದ್ಧಪಡಿಸಿ, ಸದರಿಯವರಿಗೆ ಜಾರಿಗೊಳಿಸಿ, ಸ್ವೀಕೃತಿಯನ್ನು ಪಡೆದು ಸಲ್ಲಿಸಲು ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ವಿಜಯಪುರ ಜಿಲ್ಲೆ ಇವರಿಗೆ ದಿನಾಂಕ**18.11.2021** ರಲ್ಲಿ ನೋಂದಾಯಿತ ಅಂಚೆ ಮೂಲಕ ಕಳುಹಿಸಿ ಕೊಡಲಾಗಿದೆ. ಸದರಿ ನೋಟಿಸಿನಲ್ಲಿ ಆಪಾದಿತರಾದ ಶ್ರೀ.ಡಿ.ಎನ್. ತಹಶೀಲ್ದಾರ್, (ಮೂಲ ಹುದ್ದೆ ಪ್ರಥಮ ದರ್ಜೆ ಸಹಾಯಕ) ಇವರಿಗೆ ತಮ್ಮ ವಿರುದ್ಧದ ಆರೋಪಗಳ ಕುರಿತಂತೆ ಲಿಖಿತ ಹೇಳಿಕೆಗಳನ್ನು ಸಲ್ಲಿಸಲು ಸೂಚಿಸಲಾಗಿದೆ. ಪರಿಶೀಲಿಸಲಾಗಿ ಇದುವರೆಗೆ ಸದರಿಯವರಿಂದ ತಮ್ಮ ವಿರುದ್ಧದ ದೋಷಾರೋಪಣೆಗಳಿಗೆ ಸಂಬಂಧಿಸಿದಂತೆ ಉತ್ತರ ಸ್ವೀಕೃತವಾಗಿರುವುದಿಲ್ಲ. ಅಂತೆಯೇ ಇವರ ವಿರುದ್ಧ ನಿಯಮಾನುಸಾರ ಇಲಾಖಾ ವಿಚಾರಣೆಯನ್ನು ನಡೆಸಲು ವಿಚಾರಣಾಧಿಕಾರಿಗಳನ್ನು ನೇಮಿಸಿ ನಿಗದಿತ ಅವಧಿಯಲ್ಲಿ ವಿಚಾರಣಾ ವರದಿಯನ್ನು ಪಡೆದು ಸೂಕ್ತ ಶಿಸ್ತು ಕ್ರಮ ಜರುಗಿಸಲಾಗುವುದು.

ಸಂಖ್ಯೆ: ನ ಅಇ **10** ಎಲ್‌ಎಕ್ಯೂ **2022**

(ಎನ್. ನಾಗರಾಜು ಎಂ.ಟಿ.ಬಿ.)
ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ವಲಯ ಉದ್ಯಮಗಳ ಸಚಿವರು.